<u>ಕರ್ನಾಟಕ ಸರ್ಕಾರ</u>

ಸಂಖ್ಯೆ:ಗ್ರಾಅಪ/14/ಇ-ಆಡಳಿತ/2023

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:02.05.2024

ಇವರಿಗೆ:
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಮಾನ್ಯರೇ,

**ವಿಷಯ:** ದೂರಸಂಪರ್ಕ ಮೂಲಸೌಕರ್ಯ ಟವರ್‌ಗಳ ತೆರಿಗೆಯನ್ನು ಸಂಗ್ರಹಿಸಲು ಪಂಚತಂತ್ರ 2.0 ತಂತ್ರಾಂಶದ Revenue Collection ಮಾಡ್ಯುಲ್‌ನ Taxation of Mobile Towers ಎಂಬ ಉಪ ಮಾಡ್ಯುಲ್ ಅನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ:RDP/136/GPA/2021, ದಿನಾಂಕ:02.12.2021.
2. ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಪತ್ರದ ಸಮ ಸಂಖ್ಯೆ ದಿನಾಂಕ:07.06.2022.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಇವರ ಪತ್ರದ ಸಂಖ್ಯೆ: ಕಪಂರಾಆ/ಅಭಿವೃದ್ಧಿ/22/2022, ದಿನಾಂಕ:15.12.2023

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ರನ್ವಯ ದೂರಸಂಪರ್ಕ ಮೂಲಸೌಕರ್ಯ ಟವರ್ ಮತ್ತು ಓವರ್ ಗ್ರೌಂಡ್ ಕೇಬಲ್ ಅಥವಾ ಅಂಡರ್ ಗ್ರೌಂಡ್ ಆಪ್ಟಿಕಲ್ ಫೈಬರ್ ಅಳವಡಿಸುವ ಕುರಿತು Karnataka Gram Swaraj and Panchayat Raj (Gram Panchayat) (Telecommunication Infrastructure Tower and Overground Cable or Underground Optical Fiber Cable Infrastructure) ನಿಯಮಗಳನ್ನು ದಿನಾಂಕ:02.12.2021 ರಿಂದ ಜಾರಿಗೊಳಿಸಲಾಗಿದೆ.

ಉಲ್ಲೇಖ (1) ಮತ್ತು (2) ರನ್ವಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ದೂರಸಂಪರ್ಕ ಟವರ್ /ಅಳವಡಿಸಿರುವ ಕೇಬಲ್‌ಗಳ ಸಮೀಕ್ಷೆಯನ್ನು ದಿನಾಂಕ:29.12.2023 ರೊಳಗೆ ಪೂರ್ಣಗೊಳಿಸಿ, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಎಲ್ಲಾ ಕೇಬಲ್‌ಗಳು ಅಥವಾ ಕೇಬಲ್ ಡಕ್ಟ್ ಗಳನ್ನು ಅಳವಡಿಸಿರುವ ಮತ್ತು ದೂರ ಸಂಪರ್ಕ ಮೂಲಸೌಕರ್ಯ ಟವರ್ ಗಳನ್ನು ಸ್ಥಾಪಿಸಿರುವ ಏಜೆನ್ಸಿಗಳಿಗೆ ಗ್ರಾಮ ಪಂಚಾಯತಿಯಲ್ಲಿ ಕಡ್ಡಾಯವಾಗಿ ನೋಂದಾಯಿಸಿಕೊಳ್ಳುವಂತೆ ಹಾಗೂ ನಿಯಮಗಳನ್ವಯ ಫೀಜುಗಳು/ತೆರಿಗೆಗಳನ್ನು ಪಾವತಿಸುವಂತೆ ನಿರ್ದೇಶನ/ನೋಟೀಸ್ ಗಳನ್ನು ನೀಡುವ ಮೂಲಕ ಪ್ರತಿಶತ ಪ್ರಗತಿ ಸಾಧಿಸಲು ನೋಡಲ್ ಅಧಿಕಾರಿಗಳು ಆಗಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಲಾಗಿದೆ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸದರಿ ಉದ್ದೇಶದ ಯಾವುದೇ ಏಜೆನ್ಸಿ ನೋಂದಣಿಯಿಂದ ಹೊರಗುಳಿಯದಿರುವ ಬಗ್ಗೆ ತಾಲ್ಲೂಕು ಪಂಚಾಯತಿ ಕಾರ್ಯ

ನಿರ್ವಾಹಕ ಅಧಿಕಾರಿಗಳು ದೃಢೀಕರಿಸಿಕೊಳ್ಳಲು ಉಲ್ಲೇಖ (3) ರ ಪತ್ರದಲ್ಲಿ ಅಗತ್ಯ ನಿರ್ದೇಶನ ನೀಡಲು ತಿಳಿಸಲಾಗಿದೆ.

ಮುಂದುವರೆದು, ಹೊಸ ದೂರಸಂಪರ್ಕ ಮೂಲಸೌಕರ್ಯ ಟವರ್ ಗಳನ್ನು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಅಳವಡಿಸುವ ಬಗ್ಗೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಅಸ್ತಿತ್ವದಲ್ಲಿರುವ ದೂರಸಂಪರ್ಕ ಮೂಲಸೌಕರ್ಯ ಟವರ್ ಗಳಿಗೆ ಕ್ರಮಬದ್ಧಗೊಳಿಸುವ ಬಗ್ಗೆ ಅರ್ಜಿಗಳನ್ನು ಸಲ್ಲಿಸಿ, ಗ್ರಾಮ ಪಂಚಾಯತಿಗಳಿಂದ ಅನುಮೋದನೆ ಪಡೆಯಲು ಈಗಾಗಲೇ ಬಾಪೂಜಿ ಸೇವಾ ಕೇಂದ್ರ ತಂತ್ರಾಂಶದಲ್ಲಿ ಅನುವು ಮಾಡಿಕೊಡಲಾಗಿದೆ. ಅದರಂತೆ, ಈವರೆಗೆ ಹೆಚ್ಚು ಹೊಸ ದೂರಸಂಪರ್ಕ ಮೂಲಸೌಕರ್ಯ ಟವರ್ ಮತ್ತು ಅಸ್ತಿತ್ವದಲ್ಲಿರುವ ದೂರಸಂಪರ್ಕ ಮೂಲಸೌಕರ್ಯ ಟವರ್‌ಗಳಿಗೆ ಕ್ರಮಬದ್ಧಗೊಳಿಸುವ ಬಗ್ಗೆ ಗ್ರಾಮ ಪಂಚಾಯತಿಗಳಿಂದ ಅನುಮೋದಿಸಲಾಗಿರುತ್ತದೆ.

ಈ ಸಂಬಂಧ, ಗ್ರಾಮ ಪಂಚಾಯತಿಗಳಿಂದ ಅನುಮೋದನೆಯಾಗಿರುವ ಹೊಸ ದೂರಸಂಪರ್ಕ ಮೂಲಸೌಕರ್ಯ ಟವರ್ ಗಳಿಗೆ ಮತ್ತು ಅಸ್ತಿತ್ವದಲ್ಲಿರುವ ದೂರಸಂಪರ್ಕ ಮೂಲಸೌಕರ್ಯ ಟವರ್ ಗಳಿಗೆ ತೆರಿಗೆಯನ್ನು ನಿಗಧಿಪಡಿಸಿ, ದೂರಸಂಪರ್ಕ ಮೂಲಸೌಕರ್ಯ ಟವರ್ ಸ್ಥಾಪಿಸಿರುವ ಏಜೆನ್ಸಿಗಳಿಂದ (Service Providers) ತೆರಿಗೆಯನ್ನು ಸಂಗ್ರಹಿಸಲು ಪಂಚತಂತ್ರ 2.0 ತಂತ್ರಾಂಶದ Revenue Collection ಮಾಡ್ಯುಲ್ ನಡಿ Taxation of Mobile Towers ಎಂಬ ಉಪ ಮಾಡ್ಯುಲ್ ಅನ್ನು ಅಭಿವೃದ್ಧಿಪಡಿಸಿ ಅನುಷ್ಠಾನಗೊಳಿಸಲಾಗಿದೆ.

ಆದ್ದರಿಂದ, ಬಾಪೂಜಿ ಸೇವಾ ಕೇಂದ್ರ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಿ ಅನುಮೋದನೆ ಪಡೆಯಲಾಗಿರುವ ಹೊಸ ಮತ್ತು ಅಸ್ತಿತ್ವದಲ್ಲಿರುವ ದೂರಸಂಪರ್ಕ ಮೂಲಸೌಕರ್ಯ ಟವರ್‌ಗಳ ತೆರಿಗೆಯ ಸಂಬಂಧ, ಹಿಂದಿನ ವರ್ಷಗಳ ಬಾಕಿ ಹಾಗೂ ಪ್ರಸಕ್ತ ಸಾಲಿನ ಬೇಡಿಕೆಯೊಂದಿಗೆ ತೆರಿಗೆಯ ವಿವರಗಳನ್ನು ಪಂಚತಂತ್ರ 2.0 ತಂತ್ರಾಂಶದ Revenue Collection ಮಾಡ್ಯುಲ್‌ನ Taxation of Mobile Towers ಉಪ ಮಾಡ್ಯುಲ್ ನಲ್ಲಿ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಲಾಗಿನ್ ನಲ್ಲಿ ಅಳವಡಿಸಿ, ಪಂಚತಂತ್ರ 2.0 ತಂತ್ರಾಂಶದ ಮೂಲಕ ದೂರಸಂಪರ್ಕ ಮೂಲಸೌಕರ್ಯ ಟವರ್ ಸ್ಥಾಪಿಸಿರುವ ಏಜೆನ್ಸಿಗಳಿಂದ (Service Providers) ತೆರಿಗೆಯನ್ನು ಸಂಗ್ರಹಿಸಲು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಮೇಲ್ವಿಚಾರಣೆ ಮಾಡಲು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ತಿಳಿಸಿದೆ.

ತಮ್ಮ ವಿಶ್ವಾಸಿ

**(ಪ್ರಿಯಾಂಕ ಮೇರಿ ಫ್ರಾನ್ಸಿಸ್)**
ನಿರ್ದೇಶಕರು (ಇ-ಆಡಳಿತ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಉಪ ಕಾರ್ಯದರ್ಶಿಗಳು (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
4. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ) ಸೂಕ್ತ ಕ್ರಮಕ್ಕಾಗಿ

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ
2. ಆಯುಕ್ತರ ಆಪ್ತ ಸಹಾಯಕರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ. ಬೆಂಗಳೂರು.
3. ಕಛೇರಿ ಪ್ರತಿ